ಪಂಚನಹಳ್ಳಿಗೆ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡುವ ಬಗ್ಗೆ.

೩೩೬. ಶ್ರೀ ಪಿ. ಬಿ. ಓಂಕಾರ ಮೂರ್ತಿ(ಕಡೂರು).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಳ ಜಿಲ್ಲೆಗಳ ಕೇಂದ್ರದಲ್ಲಿರುವ ಪಂಚನಹಳ್ಳಿಗೆ ಪ್ರಥಮ ದರ್ಜೆ ಕಾಲೇಜನ್ನು ೧೯೮೬-೮೭ರಲ್ಲಿ ಮಂಜೂರು ಮಾಡುವುದಾಗಿ ಭರವಸೆ ಕೊಟ್ಟಿರುವುದು ನಿಜವೇ ?

ಆ) ಇದರ ಬಗ್ಗೆ ಸಚಿವ ಸಂಪುಟದ ತೀರ್ಮಾನದ ಮೇರೆಗೆ ೧೯೮೯-೯೦ರಲ್ಲಿ ಪ್ರಾರಂಭ ಮಾಡಿರುವುದಾಗಿ ಲಿಖಿತ ಮೂಲಕ ಸರ್ಕಾರದಿಂದ ಆದೇಶ ಕೊಟ್ಟರೂ ನಿಧಾನವಾಗಿರಲು ಕಾರಣ ವೇನು ?

ಇ) ಈ ವರ್ಷವಾದರೂ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಎಂ. ಚಂದ್ರಶೇಖರ್(ಶಿಕ್ಷಣ ಮಂತ್ರಿಗಳು).—

ಅ) ನಿಜ.

ಆ) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಕಾಯ್ದೆ ೧೯೭೯ರ ಪ್ರಕರಣ ೫೩(೫)ರಂತೆ ಹೊಸ ಕಾಲೇಜುಗಳಿಗೆ ಸಂಯೋಜನೆ ನೀಡುವ ಅಧಿಕಾರ ವಿಶ್ವವಿದ್ಯಾನಿಲಯಗಳಿಗೆ ಮಾತ್ರವಿದ್ದು ಸರ್ಕಾರಕ್ಕೆ ಸಂಯೋಜನೆ ನೀಡುವಂತೆ ಶಿಫಾರಸ್ಸು ಮಾಡಲು ಅಧಿಕಾರವಿದೆ. ಕಾಲೇಜು ಶಿಕ್ಷಣ ನಿರ್ದೇಶಕರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೆ ಅರ್ಜಿ ಸಲ್ಲಿಸಿರುತ್ತಾರೆ. ವಿಶ್ವವಿದ್ಯಾನಿಲಯದಿಂದ ಅವರ ಅಭಿಪ್ರಾಯದೊಂದಿಗೆ ಪ್ರಸ್ತಾವನೆ ಬಂದ ನಂತರ ಸರ್ಕಾರವು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆಯಂತೆ ಮುಂದಿನ ಕ್ರಮ ತೆಗೆದುಕೊಂಡು ಕಾಲೇಜನ್ನು ೧೯೮೯-೯೦ನೇ ಸಾಲಿನಿಂದ ಪ್ರಾರಂಭಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು

ಇ) ವಿಶ್ವವಿದ್ಯಾನಿಲಯದಿಂದ ಪ್ರಸ್ತಾವನೆ ಬಂದ ನಂತರ ಸೂಕ್ತ ಆದೇಶ ನೀಡಲಾಗುವುದು.

ದಕ್ಷಿಣ ಕನ್ನಡ ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಅಧ್ಯಾಪಕರ ಸಂಖ್ಯೆ ಬಗ್ಗೆ

೩೭೧. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಕುಂದಾಪುರ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪದವಿಪೂರ್ವ ಕಾಲೇಜುಗಳಲ್ಲಿ ೧೯೮೮-೮೯ರ ಶೈಕ್ಷಣಿಕ ವರ್ಷ ಆರಂಭದಿಂದ ವಿವಿಧ ವಿಷಯಗಳನ್ನು ಬೋಧಿಸುವ ಎಷ್ಟು ಅಧ್ಯಾಪಕರ ಹುದ್ದೆಗಳು ಖಾಲಿ ಇವೆ. (ತಾಲ್ಲೂಕುವಾರು ಹಾಗೂ ವಿಷಯವಾರು ವಿವರಗಳನ್ನೊದಗಿಸುವುದು) :

ಆ) ಈ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಎಮ್. ಚಂದ್ರಶೇಖರ್ (ಶಿಕ್ಷಣ ಮಂತ್ರಿಗಳು).—

ಅ) ಒಟ್ಟು ೪೬ ಹುದ್ದೆಗಳು ಖಾಲಿ ಇವೆ. ತಾಲ್ಲೂಕುವಾರು ಮತ್ತು ವಿಷಯವಾರು ವಿವರಗಳ ಬಗ್ಗೆ ಪಟ್ಟಿಯನ್ನು ಲಗತ್ತಿಸಿದೆ.

ಆ) ಈ ಹುದ್ದೆಗಳು ಬಡ್ತಿಯಿಂದ ತುಂಬಬೇಕಾದ ಹುದ್ದೆಗಳು ಆಗಿರುವುದರಿಂದ, ಸ್ನಾತಕೊತ್ತರ ಪದವಿ ಪಡೆದ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗುತ್ತಿದೆ. ಅಂತಿಮ ಜ್ಯೇಷ್ಠತಾ ಪಟ್ಟಿಯು ಪ್ರಕಟಣೆಯಾದ ನಂತರ ಈ ಹುದ್ದೆಗಳನ್ನು ಸಹ ಶಿಕ್ಷಕರ ವೃಂದದಿಂದ ತುಂಬಲಾಗುವುದು.